ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂ:ಕಾಶಿಇ/ಶೈವಿ/10/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ: 16-06-2021

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ "ವಿಜಯೀಭವ" ಯೂಟ್ಯೂಬ್ ಚಾನಲ್ ಮುಖಾಂತರ "Physical Fitness for All" ಕಾರ್ಯಕ್ರಮವನ್ನು ಪ್ರಾರಂಭಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್-19 ಸಂಧರ್ಭದಲ್ಲಿ ದೈಹಿಕ ಕ್ಷಮತೆ ಕಾಪಾಡುವುದು ಬಹಳ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ದಿನಾಂಕ: 21.06.2021 ರಿಂದ ಪ್ರತಿದಿನ ಬೆಳಗ್ಗೆ 6-30 ರಿಂದ 7-30 ರವರೆಗೆ 100 ದಿನಗಳ ಕಾಲ ಇಲಾಖೆಯ "ವಿಜಯೀಭವ" ಯೂಟ್ಯೂಬ್ ಚಾನಲ್ ಮುಖಾಂತರ ಯೋಗ, ದೈಹಿಕ ಶಿಕ್ಷಣ, ಪ್ರಾಣಯಾಮ, ದೈಹಿಕ ದೃಡತೆ , ಇವುಗಳ ಬಗ್ಗೆ ಪ್ರಾಯೋಗಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸದರಿ ಕಾರ್ಯಕ್ರಮದಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು, ಬೋಧಕ/ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಹಾಗೂ ಎಲ್ಲಾ ವಯೋಮಾನದ ಸಾರ್ವಜನಿಕರು ಸಹ ಮನೆಯಿಂದಲೇ ಯೂಟ್ಯೂಬ್ ಚಾನಲ್‌ನ ಮುಖಾಂತರ ಭಾಗವಹಿಸಿ ದೈಹಿಕ ದೃಡತೆ (Physical Fitness) ಅನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಅರಿವು ಮೂಡಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಚಿಸುತ್ತಾ ಪ್ರಾಂಶುಪಾಲರುಗಳು, ದೈಹಿಕ ಶಿಕ್ಷಣ ನಿರ್ದೇಶಕರು ಬೋಧಕರು/ಕ್ರೀಡಾ ಸಂಚಾಲಕರು ಹಾಗೂ ಎಲ್ಲಾ ಅಧ್ಯಾಪಕರು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಈ ಬಗ್ಗೆ ಮನವರಿಕೆ ಮಾಡಿ ಕಾರ್ಯಕ್ರಮದಲ್ಲಿ ಪ್ರತಿ ದಿನ ಎಲ್ಲರೂ ಭಾಗವಹಿಸಲು ಅಗತ್ಯ ಕ್ರಮವಹಿಸಬೇಕೆಂದು ಸೂಚಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ :

1) ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1) ಪ್ರಾದೇಶಿಕ ಜಂಟಿ ನಿರ್ದೇಶಕರು- ಬೆಂಗಳೂರು, ಮೈಸೂರು, ಮಂಗಳೂರು ಶಿವಮೊಗ್ಗ, ಧಾರವಾಡ, ಕಲಬುರಗಿ-ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ-
2) ಮಾಹಿತಿ ಅಧಿಕಾರಿಗಳು ಮಾಹಿತಿ ತಂತ್ರಜ್ಞಾನ ವಿಭಾಗ ಕೇಂದ್ರ ಕಚೇರಿ ಬೆಂಗಳೂರು- ಈ ಸುತ್ತೋಲೆಯನ್ನು ಇಲಾಖೆ ವೆಬ್-ಸೈಟ್ ನಲ್ಲಿ ಪ್ರಕಟಿಸುವುದು.
3) ಶ್ರೀ ಮಂಜುನಾಥ್, ಸಂಚಾಲಕರು. ವಿಜಯಿ ಭವ ಯೂಟೂಬ್ ಚಾನಲ್ ಇವರಿಗೆ ಕಾರ್ಯಕ್ರಮದ ಬಗ್ಗೆ ಅಗತ್ಯ ಕ್ರಮವಹಿಸಲು.
4) ಶ್ರೀ ಶ್ರೀಕಾಂತ್. ಹಾಗೂ ಶ್ರೀ ಶ್ರೀನಿವಾಸ್ ನೋಡಲ್ ಅಧಿಕಾರಿಗಳು ಕಾಲೇಜು ಶಿಕ್ಷಣ ಇಲಾಖೆ ಕೇಂದ್ರ ಕಛೇರಿ ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5) ಕಛೇರಿ ಪ್ರತಿ.